# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 316 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 07.07.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br><br>ಪ್ರಸ್ತುತ, ಬೆಳಗಾವಿ ಜಿಲ್ಲೆಯಲ್ಲಿ 100 ಮೆಟ್ರಿಕ್ ಪೂರ್ವ ಹಾಗೂ 59 ಮೆಟ್ರಿಕ್ ನಂತರ ಹೀಗೆ ಒಟ್ಟು 159 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಒಟ್ಟಾರೆ 13895 ವಿದ್ಯಾರ್ಥಿಗಳಿಗೆ ಮಂಜೂರಾತಿ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. |
| ಆ) | ಬೆಳಗಾವಿ ಜಿಲ್ಲೆಯು ರಾಜ್ಯದ ಅತಿ ದೊಡ್ಡ ಜಿಲ್ಲೆಯಾಗಿದ್ದು, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಸತಿ ನಿಲಯಗಳನ್ನು ಸ್ಥಾಪನೆ ಮಾಡದಿರಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಹಿಂವಕ 417 ಬಿಎಂಎಸ್ 2022, ದಿನಾಂಕ: 16.09.2022 ರಲ್ಲಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಸ್ಥಳಾವಕಾಶ ಲಭ್ಯವಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸಂಖ್ಯಾಬಲವನ್ನು ಶೇ.25 ರಷ್ಟು ಹೆಚ್ಚಳ ಮಾಡಿ ಆದೇಶಿಸಲಾಗಿರುತ್ತದೆ |
| ಇ) | ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳು ಪಟ್ಟಣ/ತಾಲ್ಲೂಕು/ಜಿಲ್ಲಾ ಕೇಂದ್ರಗಳಲ್ಲಿ ಕೊಠಡಿ/ಊಟದ ವೆಚ್ಚವನ್ನು ಭರಿಸಲು ಸಾಧ್ಯವಾಗದೆ, ಶಿಕ್ಷಣ ಮೊಟಕುಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಈ) | ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚಾಗಿದ್ದು ಸೌಲಭ್ಯ/ಸುರಕ್ಷತೆ ಯ ದೃಷ್ಟಿಯಿಂದ ವಸತಿ ನಿಲಯಗಳ ಬೇಡಿಕೆ ಹೆಚ್ಚಾಗುತ್ತಿರುವುದರಿಂದ ಹೆಚ್ಚಿನ ಪ್ರಮಾಣದಲ್ಲಿ ವಸತಿ ನಿಲಯಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಬೆಳಗಾವಿ ಜಿಲ್ಲೆಯ ವಿದ್ಯಾರ್ಥಿಗಳೂ ಒಳಗೊಂಡಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಆಯಾ ವಿದ್ಯಾರ್ಥಿನಿಲಯವಾರು ನಿಗಧಿಪಡಿಸಿರುವ ಮಂಜೂರಾತಿ ಸಂಖ್ಯೆಗನುಗುಣವಾಗಿ ಪ್ರವೇಶ ನಿಯಮಗಳನುಸಾರ ಪ್ರವರ್ಗವಾರು ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ಕಲ್ಪಿಸಲಾಗುತ್ತಿದೆ.<br><br>ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆ ನಂತರ ಜಿಲ್ಲೆಯಲ್ಲಿನ ಆಯಾ ತಾಲ್ಲೂಕಿನ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಹೆಚ್ಚಿನ ಅರ್ಜಿಗಳ ಸ್ವೀಕೃತಿಗೆ ಪರ್ಯಾಯವಾಗಿ ಆಯಾ ಸಾಲಿಗೆ ಅನ್ವಯಿಸುವಂತೆ ಬೇಡಿಕೆ ಇರುವ ವಿದ್ಯಾರ್ಥಿನಿಲಯಗಳಿಗೆ ತಾತ್ಕಾಲಿಕವಾಗಿ ಸ್ಥಾನಗಳನ್ನು ಆಂತರಿಕ ವರ್ಗಾವಣೆ ಮಾಡಿಕೊಂಡು ಹೆಚ್ಚುವರಿ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗುತ್ತಿದೆ. |

| | | |
|---|---|---|
| | | ಬೆಳಗಾವಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ 7 ಮೆಟ್ರಿಕ್ ಪೂರ್ವ ಮತ್ತು 52 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು (ಅದರಲ್ಲಿ 25 ಬಾಲಕಿಯರ ವಿದ್ಯಾರ್ಥಿನಿಲಯಗಳು) ಮಂಜೂರು ಮಾಡುವಂತೆ ಪ್ರಸ್ತಾವನೆ ಸ್ವೀಕೃತವಾಗಿದ್ದು, ಅನುದಾನದ ಕೊರತೆಯಿಂದ ಪ್ರಸ್ತಾವನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿರುತ್ತದೆ.<br><br>ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಿಗೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಿ ಪ್ರವೇಶ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅನುದಾನದ ಲಭ್ಯತೆಯನುಸಾರ ವಿದ್ಯಾಸಿರಿ ಯೋಜನೆಯಡಿ ಪ್ರತಿ ವಿದ್ಯಾರ್ಥಿಗೆ ಪ್ರತಿ ಮಾಹೆ ರೂ.1500/-ರಂತೆ ಗರಿಷ್ಠ 10 ತಿಂಗಳಿಗೆ ರೂ.15,000/-ಗಳನ್ನು ಮಂಜೂರು ಮಾಡಲಾಗುತ್ತಿದೆ.<br><br>ಆದಾಗ್ಯೂ, ಹೊಸ ವಿದ್ಯಾರ್ಥಿ ನಿಲಯಗಳ ಮಂಜೂರಾತಿ ಹಾಗೂ ವಿದ್ಯಾರ್ಥಿನಿಲಯಗಳ ಸಂಖ್ಯಾಬಲ ಹೆಚ್ಚಳವು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ. |

**ಸಂಖ್ಯೆ: ಹಿಂವಕ 318 ಬಿಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.